# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 22 |
| ಮಾನ್ಯ ಸದಸ್ಯರ ಹೆಸರು | ಶ್ರೀ ರಾಮೋಜಿಗೌಡ (ಪದವೀಧರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 05.03.2025 |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮೋಜಿಣಿ ಇಲಾಖೆಯಡಿ ಪೋಡಿ, ಹದ್ದುಬಸ್ತು, ಇ-ಸ್ವತ್ತು, ಸ್ಕೆಚ್ ಮುಂತಾದ ಅರ್ಜಿಗಳು ವರ್ಷಗಟ್ಟಲೆ ವಿಲೇವಾರಿಯಾಗದೆ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಬಂದಿದೆ.<br><br>ಮೋಜಿಣಿಗೆ ಸಂಬಂಧಿಸಿದಂತೆ:- ಪ್ರಸ್ತುತ ಭೂಮಾಪನ ಇಲಾಖೆಯಲ್ಲಿ ಪೋಡಿ, ಹದ್ದುಬಸ್ತು, ಇ –ಸ್ವತ್ತು, ಇತ್ಯಾದಿ ಅಳತೆ ಕೋರಿ ಸಲ್ಲಿಕೆಯಾಗುವ ಅರ್ಜಿ ಯಲ್ಲಿ ಯಾವುದೇ ಸಮಸ್ಯೆಗಳಿಲ್ಲದೆ ನಿಯಮಾನುಸಾರ ಅಳತೆಗೆ ಯೋಗ್ಯವಿದ್ದಲ್ಲಿ ಮತ್ತು ಯಾವುದೇ ತಕರಾರು ಇಲ್ಲದಿರುವ ಅರ್ಜಿಗಳನ್ನು 30 ರಿಂದ 45 ದಿನಗಳಲ್ಲಿ ವಿಲೇವಾರಿ ಮಾಡಲಾಗುತ್ತಿದೆ.<br><br>ಉಳಿದಂತೆ ಕೆಲವು ಪ್ರಕರಣಗಳಲ್ಲಿ ಕಂದಾಯ ಶಾಖೆಯಿಂದ ಪಹಣಿ ತಿದುಪಡಿ (ಆಕಾರಬಂದು, ಪಹಣಿ ವಿಸ್ತೀರ್ಣ ಮತ್ತು ಪಹಣಿ ಕಾಲಂ 3 & 9 ರಲ್ಲಿ ವಿಸ್ತೀರ್ಣದಲ್ಲಿ ವ್ಯತ್ಯಾಸ, ಇತ್ಯಾದಿ) ಮತ್ತು ಭೂಮಂಜೂರಿ ಪ್ರಕರಣಗಳಲ್ಲಿ ಮಂಜೂತಿ ದಾಖಲೆಗಳು ಲಭ್ಯವಾಗದೆ ಇರುವದರ ಕುರಿತು ಕ್ರಮ ವಹಿಸುವ ಸಲುವಾಗಿ, ಇತ್ಯಾದಿ ಕಾರಣಗಳಿಂದಾಗಿ ವಿಲೇವಾರಿಯಲ್ಲಿ ವಿಳಂಬವಾಗುತ್ತಿದೆ.<br><br>**ಬಾಕಿಯಿರುವ ಪೋಡಿ, ಹದ್ದುಬಸ್ತು, ಇ-ಸ್ವತ್ತು, ಇತ್ಯಾದಿ ಅರ್ಜಿಗಳ ಶೀಘ್ರ ವಿಲೇವಾರಿಗೆ ಸರ್ಕಾರ ಕೈಗೊಂಡ ಕ್ರಮಗಳು :**<br>1. ಬಾಕಿ ಅರ್ಜಿಗಳ ಶೀಘ್ರ ವಿಲೇವಾರಿ ಕುರಿತು ಕಳೆದ ವರ್ಷ ಇಲಾಖೆಯು 1227 ಜನ ಹೆಚ್ಚಿನ ಪರವಾನಗಿ ಭೂಮಾಪಕರನ್ನು ಆಯ್ಕೆ ಮಾಡಿಕೊಂಡು ತರಬೇತಿ ನೀಡಿ ಮಾರ್ಚ್-2024ರ ಅಂತ್ಯಕ್ಕೆ ರಾಜ್ಯದ ವಿವಿಧ ತಾಲ್ಲೂಕುಗಳಿಗೆ ಕಾರ್ಯ ನಿಯೋಜನೆ ಮಾಡಲಾಗಿದೆ.<br>2. ದರಖಾಸ್ತು ಪೋಡಿ ಕುರಿತಂತೆ ನಮೂನೆ 1 ರಿಂದ 5 ಮತ್ತು 6 ರಿಂದ 10 ಗಳ ಭರ್ತಿ ಮತ್ತು ದೃಡೀಕರಿಸುವ ಪ್ರಕ್ರಿಯೆಯನ್ನು ದಿನಾಂಕ:25-11-2024 ರಂದು ಸರಳಿಕರಿಸಿ ಆದೇಶಿಸಿದ್ದು, ಈ ಆದೇಶದ ಪೂರ್ವದಲ್ಲಿ ಕಳೆದ 3 ವರ್ಷಗಳಲ್ಲಿ ಒಟ್ಟಾರೆ 5000 ಅರ್ಜಿಗಳ ವಿಲೇವಾರಿ ಮಾಡಲಾಗಿತ್ತು. ಸದರಿ ಸರಳೀಕರಣ ಆದೇಶದಿಂದಾಗಿ ಕಳೆದ 3 ತಿಂಗಳುಗಳಲ್ಲಿ ಸುಮಾರು 6000 ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ.<br>3. ದರಖಾಸ್ತು ಪೋಡಿ ದುರಸ್ತಿ, 11ಇ ಸ್ಕೇಚ್ ಹದ್ದುಬಸ್ತು ಮುಂತಾದ ಎಲ್ಲಾ ತರಹದ ಅರ್ಜಿಗಳನ್ನು ಸರ್ಕಾರಿ |
| ಆ) | ಬಂದಿದ್ದಲ್ಲಿ, ಈ ವಿಳಂಬಕ್ಕೆ ಕಾರಣವಾದ ಸಿಬ್ಬಂದಿ ಕೊರತೆ ಮತ್ತು ತಾಂತ್ರಿಕ ದೋಷದಂತಹ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ.(ಮಾಹಿತಿ ನೀಡುವುದು) ರಾಜ್ಯದಲ್ಲಿ ಉಪ ನೋಂದಣಿ ಕಛೇರಿಗಳ ಮೇಲೆ ತುಂಬಾ ಒತ್ತಡಗಳಿದ್ದು, ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ನೂತನವಾಗಿ ರಚನೆಯಾಗಿರುವ ಹೊಸ ತಾಲ್ಲೂಕುಗಳಲ್ಲಿ ಉಪ ನೋಂದಣಾಧಿಕಾರಿ ಕಛೇರಿ ಪ್ರಾರಂಭಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು? | |

| ಕ್ರ. ಸಂ | ಪ್ರಶ್ನೆ | ಉತ್ತರ |
| --- | --- | --- |
| | | ಭೂಮಾಪಕರೊಂದಿಗೆ ಪರವಾನಗಿ ಭೂಮಾಪಕರನ್ನೂ ಸಹ ಬಳಸಿಕೊಂಡು ಅಳತೆ ಮಾಡಲು ದಿನಾಂಕ:22.02.2025 ರಂದು ಆದೇಶಿಸಲಾಗಿದೆ.<br><br>4. ಭೂಮಾಪನ ಇಲಾಖೆಯಲ್ಲಿ ಅಳತೆ ಕೋರಿ ಸ್ವೀಕೃತವಾಗುವ ಎಲ್ಲಾ ಅರ್ಜಿಗಳನ್ನು ಮೋಜಿಣಿ ತಂತ್ರಾಂಶದ ಮುಖಾಂತರ ಆನ್‌ಲೈನ್‌ನಲ್ಲಿ ಸ್ವೀಕರಿಸಲಾಗುತ್ತಿದ್ದು, ಮೋಜಿಣಿ ತಂತ್ರಾಂಶದ ಮೂಲಕವೇ ಅಳತೆಗಾಗಿ ಭೂಮಾಪಕರಿಗೆ ಹಂಚಿಕೆ ಮಾಡಿ, ಅಳತೆಯಾದ ನಂತರ ಕಡತಗಳನ್ನು ಅಪ್‌ಲೋಡ್ ಮಾಡಲು ಹಾಗೂ ಅಪ್‌ಲೋಡ್ ಮಾಡಿರುವ ಕಡತಗಳ ಪರಿಶೀಲನೆ ಮತ್ತು ಅನುಮೋದನೆಯನ್ನು ಸಹ ತಂತ್ರಾಂಶದ ಮುಖಾಂತರ ಆನ್‌ಲೈನ್‌ನಲ್ಲೇ ಸರದಿ ಸಾಲಿನಂತೆ ನಿರ್ವಹಿಸುವ ಮೂಲಕ, ಪ್ರಕರಣಗಳ ವಿಲೇವಾರಿಯಲ್ಲಿ ಯಾವುದೇ ವಿಳಂಬಕ್ಕೆ ಅವಕಾಶವಿಲ್ಲದಂತೆ ಕ್ರಮ ವಹಿಸಲಾಗುತ್ತಿದೆ.<br><br>5. ಕಂದಾಯ ಇಲಾಖೆಯಿಂದ ಪಹಣಿ ತಿದ್ದುಪಡಿ ಕುರಿತು ಕಂದಾಯ ಅದಾಲತ್‌ಗಳನ್ನು ನಡೆಸಲಾಗುತ್ತಿದೆ.<br><br>6. ವಿಡಿಯೋ ಸಂವಾದ ಮತ್ತು ವಿಭಾಗವಾರು ಅಧಿಕಾರಿಗಳ ಸಭೆ ನಡೆಸಿ ಪ್ರಗತಿ ಪರಿಶೀಲನೆ ಮಾಡಿ ಹೆಚ್ಚಿನ ಪ್ರಗತಿ ಸಾಧಿಸಲು ಸೂಕ್ತ ಮಾರ್ಗದರ್ಶನ ಮತ್ತು ಅಗತ್ಯ ಸೂಚನೆ ನೀಡಲಾಗುತ್ತಿದೆ.<br><br>7. ಹೆಚ್ಚಿನ ಪ್ರಕರಣಗಳು ಬಾಕಿ ಇರುವ ತಾಲ್ಲೂಕುಗಳಿಗೆ ಕಡಿಮೆ ಪ್ರಕರಣಗಳು ಬಾಕಿ ಇರುವ ತಾಲ್ಲೂಕಿನಿಂದ ಭೂಮಾಪಕರನ್ನು ನಿಯೋಜನೆ ಮಾಡಿ ಪ್ರಕರಣಗಳನ್ನು ವಿಲೇಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br><br>8. 750 ಭೂಮಾಪಕರ ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗದಿಂದ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿದ್ದು, ಸ್ವೀಕೃತವಾಗಿರುವ ಅರ್ಜಿಗಳ ಪರಿಶೀಲನೆ ಕಾರ್ಯ ಪ್ರಗತಿಯಲ್ಲಿದೆ.<br><br>9. ಭೂದಾಖಲೆಗಳ ಸಹಾಯಕ ನಿರ್ದೇಶಕರ ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗದಿಂದ ಅರ್ಜಿ ಆಹ್ವಾನಿಸಿದ್ದು, ದಿನಾಂಕ:18-02-2025 ರಂದು ಸಾಮನ್ಯ ವಿಷಯದ ಕುರಿತು ಪರೀಕ್ಷೆ ನಡೆಸಲಾಗಿದ್ದು, ನಿರ್ದಿಷ್ಟ ವಿಷಯದ ಪರೀಕ್ಷೆಯನ್ನು ದಿನಾಂಕ:06-03-2025 ರಂದು ನಿಗಧಿಪಡಿಸಲಾಗಿದೆ.<br><br>10. ರಾಜ್ಯದ 22 ಜಿಲ್ಲೆಗಳಲ್ಲಿ ಇಲಾಖೆಯ ವಿವಿಧ ಪ್ರಮುಖ ಯೋಜನೆ ಮತ್ತು ಸಾರ್ವಜನಿಕರ ಅರ್ಜಿಗಳ ವಿಲೇವಾರಿ ಕುರಿತು ಅಗತ್ಯತೆಯ ಮೇರೆಗೆ ಹೆಚ್ಚಿನ 1000 ಪರವಾನಗಿ ಭೂಮಾಪಕರ ಆಯ್ಕೆ ಕುರಿತು ಪ್ರಸ್ತಾವನೆಯು ಆರ್ಥಿಕ ಇಲಾಖೆಯಲ್ಲಿ ಪರಿಶೀಲನೆಗಾಗಿ ಬಾಕಿ ಇರುತ್ತದೆ. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| | | **ಉಪ ನೊಂದಣಿ ಕಛೇರಿಗೆ ಸಂಬಂಧಿಸಿದಂತೆ:-** ಸರ್ಕಾರದ ಆದೇಶ ಸಂಖ್ಯೆ ಕಂಇ 35 ಭೂದಾಪು 2017 ದಿನಾಂಕ:6-9-2017 ರನ್ವಯ 49 ಹೊಸ ತಾಲ್ಲೂಕುಗಳನ್ನು ಜನವರಿ 2018 ರಿಂದ ಅನ್ವಯವಾಗುವಂತೆ ರಚನೆ ಮಾಡಲು ತಾತ್ವಿಕವಾಗಿ ಆಡಳಿತಾತ್ಮಕ ಅನುಮೋದನೆಯನ್ನು ನೀಡಿ ಆದೇಶಿಸಲಾಗಿರುತ್ತದೆ.<br><br>ನೂತನವಾಗಿ ರಚನೆಯಾಗಿರುವ ತಾಲ್ಲೂಕುಗಳಲ್ಲಿ ಹೊಸದಾಗಿ ಉಪ ನೋಂದಣಿ ಕಛೇರಿಗಳನ್ನು ಪ್ರಾರಂಭಿಸಲು ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿದ್ದು, ಆರ್ಥಿಕ ಇಲಾಖೆಯು ಪ್ರಸ್ತುತ ಇರುವ ಉಪ ನೋಂದಣಿ ಕಛೇರಿಗಳಲ್ಲಿ ನೋಂದಣಿಯಾಗುವ ದಾಖಲೆಗಳ ಸಂಖ್ಯೆ/ ಆದಾಯ/ ವಹಿವಾಟುಗಳ ಸಂಖ್ಯೆ/ ಇತ್ಯಾದಿಗಳ ವಿಶ್ಲೇಷಣೆ (Analysis) ನಂತರ ಕಡಿಮೆ ನೋಂದಣಿಯಾಗುವ ದಾಖಲೆಗಳ ಸಂಖ್ಯೆ/ ಆದಾಯ/ ವಹಿವಾಟುಗಳ ಸಂಖ್ಯೆ ಇರುವಂತಹ ಕಛೇರಿಗಳನ್ನು ಗುರುತಿಸಿ, ಎಲ್ಲಾ ಉಪ ನೋಂದಣಿ ಕಛೇರಿಗಳಲ್ಲಿ ನೋಂದಣಿಯಾಗುವ ದಾಖಲೆಗಳ ಸಂಖ್ಯೆ/ ವಹಿವಾಟುಗಳ ಸಂಖ್ಯೆ ಮತ್ತು ಕೆಲಸದ ಹೊರೆಗೆ ಅನುಗುಣವಾಗಿ ಹುದ್ದೆಗಳನ್ನು ಮತ್ತು ಕಛೇರಿಗಳನ್ನು ಸ್ಥಳಾಂತರಗೊಳಿಸಿ, ತರ್ಕಬದ್ಧಗೊಳಿಸಲು (Rationalize) ಆರ್ಥಿಕ ಇಲಾಖೆಯು ತಿಳಿಸಿದ ಹಿನ್ನೆಲೆಯಲ್ಲಿ ಸರ್ಕಾರದ ಆದೇಶ ಸಂಖ್ಯೆ: ಕಂಇ/181/ಎಂಎನ್ಎಸ್ಎ/2022, ದಿನಾಂಕ:05-01-2023 ರಲ್ಲಿ ನೂತನವಾಗಿ ರಚಿಸಲಾಗಿರುವ ತಾಲ್ಲೂಕುಗಳ ಪೈಕಿ ಈ ಕೆಳಗೆ ನೀಡಿರುವ ಕೊಷ್ಟಕದಲ್ಲಿನ 8 ತಾಲ್ಲೂಕುಗಳಲ್ಲಿ ಹೊಸ ಉಪನೋಂದಣಾಧಿಕಾರಿಗಳ ಕಛೇರಿಗಳನ್ನು ಪ್ರಾರಂಭಿಸಲು ಅನುಮೋದನೆ ನೀಡಿ ಆದೇಶಿಸಲಾಗಿದೆ. |

| ಕ್ರ. ಸಂ | **ಹೊಸ ಉಪನೋಂದಣಿ ಕಛೇರಿ ಪ್ರಾರಂಭಿಸಲು ಅನುಮತಿ ನೀಡಿರುವ ತಾಲ್ಲೂಕು** | **ಸಂಬಂಧಿಸಿದ ಜಿಲ್ಲೆ** |
|---|---|---|
| 1 | ಕಾಗವಾಡ | ಬೆಳಗಾವಿ |
| 2 | ಕುಕನೂರು | ಕೊಪ್ಪಳ |
| 3 | ಕನಕಗಿರಿ | ಕೊಪ್ಪಳ |
| 4 | ಸಿರಿವಾರ | ರಾಯಚೂರು |
| 5 | ಕಾಪು | ಉಡುಪಿ |
| 6 | ಬಬಲೇಶ್ವರ | ವಿಜಯಪುರ |
| 7 | ತಿಕೋಟಾ | ವಿಜಯಪುರ |
| 8 | ತಾಳಿಕೋಟೆ | ವಿಜಯಪುರ |

**ಸಂಖ್ಯೆ: ಕಂಇ 22 ಎಸ್ಎಸ್ಸಿ 2025**

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು